ಕರ್ನಾಟಕ ಸರ್ಕಾರ
Government of karnataka
ಡಿಎಸ್ಇಆರ್‌ಟಿ
DSERT
ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ಇಲಾಖೆ
DEPARTMENT OF STATE EDUCATIONAL RESEARCH AND TRAINING
No 4, 100 FT RING ROAD, BANASHANKARI 3 RD STAGE BENGALURU - 560 085
Email: dpi.dsert-ka@nic.in Website: http://dsert.kar.nic.in
Phone - 080 26980100
Fax - 080 26422377

DSERT/EVG/ಎಸ್.ಎಸ್.ಎಲ್.ಸಿ/ಪ.ನಿ/22/2021–22 ದಿನಾಂಕ : 30.11.2021

# ಸುತ್ತೋಲೆ

ವಿಷಯ: ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಪರಿಗಣಿಸಬಹುದಾದ ಮತ್ತು ಪರಿಗಣಿಸಬಾರದ ಪಠ್ಯಾಂಶಗಳನ್ನು ವಿವಿಧ ವಿಷಯಗಳಲ್ಲಿ ಪಟ್ಟಿ ಮಾಡಿದ್ದು ಅದರಂತೆ ಕ್ರಮವಹಿಸುವ ಬಗ್ಗೆ.

*******

ಕೋವಿಡ್–19 ರ ಹಿನ್ನೆಲೆಯಲ್ಲಿ ರಾಜ್ಯದಲ್ಲಿ 2021–22ನೇ ಶೈಕ್ಷಣಿಕ ವರ್ಷದಲ್ಲಿ 10 ನೇ ತರಗತಿ ವಿದ್ಯಾರ್ಥಿಗಳಿಗೆ ಭೌತಿಕ ತರಗತಿಗಳು ತಡವಾಗಿ ಪ್ರಾರಂಭವಾಗಿರುತ್ತವೆ. ರಾಜ್ಯದಲ್ಲಿ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರೌಢಶಾಲೆಗಳನ್ನು 23.08.2021 ರಿಂದ ತೆರೆದು ಅರ್ಧ ದಿನ – ಬೆಳಗಿನ ಅವಧಿಯಲ್ಲಿ ಮಾತ್ರ ಭೌತಿಕ ತರಗತಿಗಳನ್ನು ನಡೆಸಲಾಯಿತು. 04.10.2021 ರಿಂದ ಪೂರ್ಣ ಪ್ರಮಾಣದಲ್ಲಿ ಭೌತಿಕ ತರಗತಿಗಳನ್ನು ಪ್ರಾರಂಭಿಸಲಾಗಿದೆ. ಈ ಹಿನ್ನೆಲೆಯಲ್ಲಿ ಪ್ರಸಕ್ತ ಸಾಲಿನಲ್ಲಿ ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳಿಗೆ ಕಲಿಕಾ ಮತ್ತು ಬೋಧನಾ ಪ್ರಕ್ರಿಯೆಗೆ ಅಗತ್ಯಕ್ಕಿಂತಲೂ ಕಡಿಮೆ ಕಾಲಾವಕಾಶ ಸಿಕ್ಕಿದೆ. ಇದರಿಂದಾಗಿ ಇಡೀ ಸಾಲಿನ ಪಠ್ಯಕ್ರಮ ಬೋಧಿಸುವುದು ಕಷ್ಟಕರ ಎಂಬ ಸಲಹೆಗಳು ಬಂದಿರುತ್ತವೆ.

ಕಳೆದ ಶೈಕ್ಷಣಿಕ ಸಾಲಿನಲ್ಲಿ ಪೂರ್ಣ ಪ್ರಮಾಣದಲ್ಲಿ ಭೌತಿಕ ತರಗತಿಗಳು ನಡೆಯದೇ ಇರುವುದರಿಂದ ವಿದ್ಯಾರ್ಥಿಗಳ ಕಲಿಕೆಯಲ್ಲಿ ಅಂತರ ಉಂಟಾಗಿದ್ದು, ಈ ಸಾಲಿನ ಎಲ್ಲಾ ಪಠ್ಯಾಂಶಗಳನ್ನು ಕಲಿಯುವುದು ಕಷ್ಟಕರ ಎಂಬ ಅಭಿಪ್ರಾಯ/ಸಲಹೆಗಳು ವ್ಯಕ್ತವಾಗಿವೆ.

ಈ ಹಿನ್ನೆಲೆಯಲ್ಲಿ ಲಭ್ಯವಾಗುವ ಸಮಯ, ವಿದ್ಯಾರ್ಥಿಗಳ ಕಲಿಕೆಯ ಒತ್ತಡವನ್ನು ಗಮನದಲ್ಲಿರಿಸಿ, 2021–22 ನೇ ಸಾಲಿಗೆ ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷಗೆ ಕೆಲವು ಪಠ್ಯಾಂಶಗಳನ್ನು ಪರಿಗಣಿಸದಿರಲು ತಜ್ಞರು ಅಭಿಪ್ರಾಯಿಸಿರುತ್ತಾರೆ. ಅದರಂತೆ ಮಾರ್ಚ್ 2022 ರ ವರೆಗೆ ಲಭ್ಯವಿರುವ ಅವಧಿಗಳನ್ನು ಗಮನದಲ್ಲಿರಿಸಿ ಎಸ್.ಎಸ್.ಎಲ್.ಸಿ ಪರೀಕ್ಷೆಗೆ ಪರಿಗಣಿಸುವ ಮತ್ತು ಪರಿಗಣಿಸದ ಪಠ್ಯಾಂಶಗಳನ್ನು ವಿವಿಧ ವಿಷಯಗಳಲ್ಲಿ ಗುರುತಿಸಿ ಇದರೊಂದಿಗೆ ಲಗತ್ತಿಸಿದೆ. ಸದರಿ ವಿವರಗಳನ್ನು http://dsert.kar.nic.in ವೆಬ್‌ಸೈಟ್‌ನಲ್ಲಿ ಸಹ ಅಳವಡಿಸಿದೆ. ಸದರಿ ಮಾಹಿತಿಯನ್ನು 10ನೇ ತರಗತಿ ಬೋಧಿಸುತ್ತಿರುವ ಎಲ್ಲಾ ಶಿಕ್ಷಕರಿಗೆ ಮತ್ತು ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ತಲುಪುವಂತೆ ಸೂಕ್ತ ಕ್ರಮ ಕೈಗೊಳ್ಳಲು ಈ ಮೂಲಕ ತಿಳಿಸಿದೆ.

ಆಯುಕ್ತರು,
ಸಾರ್ವಜನಿಕ ಶಿಕ್ಷಣ ಇಲಾಖೆ
ಬೆಂಗಳೂರು.

ಗೆ,

1. ರಾಜ್ಯದ ಎಲ್ಲಾ ಜಿಲ್ಲೆಗಳ ಉಪನಿರ್ದೇಶಕರುಗಳು (ಆಡಳಿತ) ಹಾಗೂ ಉಪನಿರ್ದೇಶಕರುಗಳು (ಅಭಿವೃದ್ಧಿ) ರವರಿಗೆ ಅಗತ್ಯ ಕ್ರಮಕ್ಕಾಗಿ.

2. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣ ಅಧಿಕಾರಿಗಳು ಹಾಗೂ ಎಲ್ಲಾ ಕ್ಷೇತ್ರ ಸಮನ್ವಯಾಧಿಕಾರಿಗಳಿಗೆ ಉಪನಿರ್ದೇಶಕರುಗಳು (ಆಡಳಿತ) ರವರ ಮೂಲಕ ಅಗತ್ಯ ಕ್ರಮಕ್ಕಾಗಿ.

**ಪ್ರತಿಯನ್ನು,**

1. ಮಾನ್ಯ ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವರು–ಕರ್ನಾಟಕ ಸರ್ಕಾರ ರವರ ಆಪ್ತ ಕಾರ್ಯದರ್ಶಿರವರಿಗೆ ಕಳುಹಿಸುತ್ತಾ ಮಾನ್ಯ ಸಚಿವರ ಗಮನಕ್ಕೆ ತರಲು ಕೋರಿದೆ.
2. ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ರವರಿಗೆ ಗೌರವ ಪೂರ್ವಕವಾಗಿ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ನೃಪತುಂಗ ರಸ್ತೆ, ಬೆಂಗಳೂರು ರವರಿಗೆ ಮಾಹಿತಿಗಾಗಿ.
4. ಅಪರ ಆಯುಕ್ತರು, ಸಾ.ಶಿ.ಇ. ಧಾರವಾಡ ಆಯುಕ್ತಾಲಯ ಮತ್ತು ಕಲಬುರ್ಗಿ ಸಾ.ಶಿ.ಇ. ಕಲಬುರ್ಗಿ ಆಯುಕ್ತಾಲಯರವರಿಗೆ ಮಾಹಿತಿಗಾಗಿ ಹಾಗೂ ಕ್ರಮಕ್ಕಾಗಿ.
5. ರಾಜ್ಯದ ಎಲ್ಲಾ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ ರವರಿಗೆ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ
6. ಕಛೇರಿ ಪ್ರತಿ